# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 37 |
| ಸದಸ್ಯರ ಹೆಸರು | ಶ್ರೀ ಹೆಚ್.ಎಂ ರಮೇಶ್‌ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 07-12-2020 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| ಪ್ರಶ್ನೆ | ಉತ್ತರ |
|---|---|
| **ಅ)** ಕೋವಿಡ್-19ರ ಹಿನ್ನೆಲೆಯಲ್ಲಿ ಖಾಸಗಿ ಶಾಲೆಗಳ ಆರ್ಥಿಕ ಪರಿಸ್ಥಿತಿಯು ತುಂಬಾ ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಬಂದಿದೆ,<br>2020-21ನೇ ಸಾಲಿಗೆ ಪೋಷಕರು ಶಾಲೆಗಳಿಗೆ ಮಕ್ಕಳನ್ನು ದಾಖಲಿಸುತ್ತಿಲ್ಲ ಹಾಗೂ ಶುಲ್ಕಗಳನ್ನು ಪಾವತಿಸುತ್ತಿಲ್ಲವೆಂಬ ಖಾಸಗಿ ಶಾಲೆಗಳ ಅಹವಾಲುಗಳ ಹಿನ್ನೆಲೆಯಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: ಸಿ7(2)ಪ್ರಾಶಿಅ.ಶುಲ್ಕ.30: 2020-21, ದಿನಾಂಕ:05/09/2020ರಲ್ಲಿ ಸೆಪ್ಟೆಂಬರ್, 2019ರ ಅಂತ್ಯದೊಳಗೆ ಈ ಸಾಲಿನ ಪ್ರವೇಶಾತಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಹಾಗೂ ಮೊದಲನೇ ಕಂತಿನ ಶುಲ್ಕವನ್ನು ಪಡೆಯಲು ಆದೇಶಿಸಲಾಗಿದೆ. |
| **ಆ)** ಖಾಸಗಿ ಶಾಲೆಗಳ ಶುಲ್ಕದ ವಿಷಯವಾಗಿ ಸರ್ಕಾರದಿಂದ ಸ್ಪಷ್ಟ ನಿರ್ದೇಶನ ಇಲ್ಲದಿರುವ ಕಾರಣದಿಂದ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ದಾಖಲಾತಿ ಮಾಡಿಸಲು ಸಾಕಷ್ಟು ಗೊಂದಲಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಸರ್ಕಾರವು ವಿದ್ಯಾರ್ಥಿಗಳ ದಾಖಲಾತಿ ಸಂಬಂಧ ಹಾಗೂ ಶುಲ್ಕ ಪಾವತಿಯ ಬಗ್ಗೆ ಸ್ಪಷ್ಟವಾಗಿ ನಿರ್ದೇಶನ ನೀಡಿರುತ್ತದೆ. ಆದರೆ, ಅನೇಕ ಪೋಷಕರು ತಮ್ಮದೇ ಕಾರಣಗಳಿಂದ ತಮ್ಮ ಮಕ್ಕಳನ್ನು ದಾಖಲಾತಿ ಮಾಡಿಸದಿರುವುದು ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ದಾಖಲಾತಿ ಪ್ರಕ್ರಿಯೆಯನ್ನು ದಿನಾಂಕ:13-11-2020ರವರೆಗೆ ಅವಕಾಶ ಕಲ್ಪಿಸಲಾಗಿತ್ತು. |
| **ಇ)** ರಾಜ್ಯದಲ್ಲಿನ ಅನೇಕ ಖಾಸಗಿ ಶಾಲೆಗಳಿಗೆ ಆರ್.ಟಿ.ಇ ಹಣ ಬಿಡುಗಡೆಯಾಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸದರಿ ಹಣವನ್ನು ಯಾವ ಕಾಲಮಿತಿಯೊಳಗೆ ಬಿಡುಗಡೆಗೊಳಿಸಲಾಗುವುದು? (ವಿವರ ನೀಡುವುದು) | ಆರ್.ಟಿ.ಇ ಅಡಿಯಲ್ಲಿ, 2020-21ನೇ ಸಾಲಿಗೆ ಶುಲ್ಕ ಮರುಪಾವತಿಗಾಗಿ ಹಂಚಿಕೆಯಾದ ರೂ.550 ಕೋಟಿಗಳಲ್ಲಿ ಈಗಾಗಲೇ ಸರ್ಕಾರದಿಂದ ರೂ.412.50 ಕೋಟಿಗಳು ಬಿಡುಗಡೆಯಾಗಿದ್ದು, ಸದರಿ ಹಣವನ್ನು ಸಂಪೂರ್ಣವಾಗಿ ಅರ್ಹ ಶಾಲೆಗಳಿಗೆ ಆರ್.ಟಿ.ಇ ಶುಲ್ಕ ಮರು ಪಾವತಿಗೆ ವೆಚ್ಚ ಮಾಡಲಾಗಿದೆ. |

**ಇಡಿ 148 ಪಿಜಿಸಿ 2020**

[ ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.